# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 205 (1456)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಗುತ್ತಿಗೆದಾರರಿಗೆ ವರ್ಷಾನುಗಟ್ಟಲೆ ಗುತ್ತಿಗೆ ಹಣ ಬಾಕಿ ಇರುವುದು

(ಅ) ಲೋಕೋಪಯೋಗಿ ಇಲಾಖೆಯಲ್ಲಿ ಗುತ್ತಿಗೆದಾರರಿಗೆ ವರ್ಷಾನುಗಟ್ಟಲೆ ಗುತ್ತಿಗೆ ಹಣ ನೀಡದೆ ಬಾಕಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಕೋಲಾರ ಜಿಲ್ಲೆಯ ಗುತ್ತಿಗೆದಾರರಿಗೆ ವಿವಿಧ ಲೆಕ್ಕಶೀರ್ಷಿಕೆಯಡಿ ಬಾಕಿ ಇರುವ ಒಟ್ಟು ಮೊತ್ತವೆಷ್ಟು ; (ವಿವರಗಳನ್ನು ನೀಡುವುದು)

(ಇ) ಗುತ್ತಿಗೆದಾರರಿಗೆ ಹಣ ಬಿಡುಗಡೆ ಮಾಡುವಾಗ ಸರ್ಕಾರ ಅನುಸರಿಸುತ್ತಿರುವ ಮಾನದಂಡಗಳೇನು ;

(ಈ) ಇತ್ತೀಚೆಗೆ ಹಣ ಬಿಡುಗಡೆ ಮಾಡುವಾಗ ಸರ್ಕಾರದ ಮಾನದಂಡದ ಪ್ರಕಾರ ಬಾಕಿ ಮೊಬಲಗನ್ನು ಪಾವತಿಸಲಾಗುತ್ತಿದೆಯೇ ;

(ಉ) ಹಾಗಾಗದಿದ್ದಲ್ಲಿ, ಇದಕ್ಕೆ ಕಾರಣಗಳೇನು ;

(ಊ) ಮುಂದಿನ ದಿನಗಳಲ್ಲಿ ಸರ್ಕಾರ ಮಾನದಂಡಗಳ ಪ್ರಕಾರ ಬಾಕಿ ಮೊತ್ತ ಪಾವತಿಸಲು ಕ್ರಮ ಕೈಗೊಳ್ಳಲಾಗುವುದೇ ;

(ಋ) ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗಾಗಿ ಗುತ್ತಿಗೆದಾರರಿಗೆ ಬಾಕಿ ಮೊತ್ತವನ್ನು ಪಾವತಿಸಲಾಗುವುದು ? (ವಿವರಗಳನ್ನು ನೀಡುವುದು)